ಉತ್ತರ ಕನ್ನಡ ಜಿಲ್ಲೆಯ ಒಟ್ಟು			**26150**
178	ಯಾದಗಿರಿ	ಯಾದಗಿರಿ	7920
179		ಶಾಹಪುರ್	3846
180		ಸೂರಪುರ್	6214
ಯಾದಗಿರಿ ಜಿಲ್ಲೆಯ ಒಟ್ಟು			**17980**
ಒಟ್ಟು			**1235175**

ಸೂಕ್ಷ್ಮ ಹನಿ ನೀರಾವರಿ ಪದ್ಧತಿ

2128 (3145); ಶ್ರೀ ಗುರುಪಾಗೌಡ ಸಂಗನಗೌಡ ಪಾಟೀಲ (ರೋಣ)

ಅ) ಮುಂಡರಗಿ ಮತ್ತು ಗದಗ ತಾಲ್ಲೂಕುಗಳಿಗೆ ಹಾಗೂ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲ್ಲೂಕಿಗೆ ಶಿಂಗಟಾಲೂರು ಏತ ನೀರಾವರಿ ಯೋಜನೆಯ ಎಡಭಾಗದಲ್ಲಿ ಬರುವ ಕಾಮಗಾರಿಯನ್ನು ಯಾವಾಗ ಸಂಪೂರ್ಣಗೊಳಿಸಿ ನೀರನ್ನು ಒದಗಿಸಲಾಗುವುದು;

ಆ) ಈ ಹಿಂದೆ ಈ ಯೋಜನೆಯನ್ನು ಹರಿಯುವ ನೀರಿನ (ಫ್ಲೋ ಇರಿಗೇಶನ್) ಮುಖಾಂತರ ನೀರಾವರಿ ಸೌಲಭ್ಯ ಒದಗಿಸುವ ಯೋಜನೆಯಿದ್ದುದು ನೀಜವೇ;

ಇ) ಹಾಗಿದ್ದಲ್ಲಿ, 2013–14 ನೇ ಸಾಲಿನಲ್ಲಿ ಆಯವ್ಯಯದಲ್ಲಿ ಸೂಕ್ಷ್ಮ ಹನಿ ನೀರಾವರಿ (ಮೈಕ್ರೋ ಇರಿಗೇಶನ್) ಮೂಲಕ ಹೆಚ್ಚಿನ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸುವುದಾಗಿ ಘೋಷಣೆ ಮಾಡಿರುವುದು ನಿಜವಲ್ಲವೇ;

ಈ) ಸೂಕ್ಷ್ಮ ಹನಿ ನೀರಾವರಿ ಒದಗಿಸುವ ಅಂದಾಜು ಪ್ರಕ್ರಿಯೆ ಯಾವ ಹಂತದಲ್ಲಿದೆ;

ಉ) ಹಾಗಿದ್ದಲ್ಲಿ, ಈಗಾಗಲೇ ಸೂಕ್ಷ್ಮ ಹನಿ ನೀರಾವರಿ ಸೌಲಭ್ಯಕ್ಕೆ ಸರ್ಕಾರವು ಅನುಮೋದನೆ ನೀಡಿದಿಯೇ;

ಊ) ಹಾಗಿದ್ದಲ್ಲಿ, ಯೋಜನೆಯನ್ನು ಪೂರ್ಣಗೊಳಿಸಲು ಎಷ್ಟು ಅವಧಿ ಬೇಕಾಗುವುದು?

ಶ್ರೀ ಎಂ.ಬಿ. ಪಾಟೀಲ (ಜಲ ಸಂಪನ್ಮೂಲ ಸಚಿವರು)

ಅ) ಸಿಂಗಟಾಲೂರು ಏತ ನೀರಾವರಿ ಯೋಜನೆಯ ಎಡಭಾಗದ ಮುಂಡರಗಿ, ಗದಗ ತಾಲೂಕು ಹಾಗೂ ಕೊಪ್ಪಳ ತಾಲೂಕುಗಳಲ್ಲಿ ಬರುವ ಕಾಮಗಾರಿಗಳು ಈಗಾಗಲೇ ವಿವಿಧ ಹಂತದ ಪ್ರಗತಿಯಲ್ಲಿದ್ದು, 2016 ರ ಅಂತ್ಯಕ್ಕೆ ಕಾಮಗಾರಿಯನ್ನು ಪೂರ್ಣಗೊಳಿಸಿ, ನೀರನ್ನು ಒದಗಿಸಲು ಯೋಜಿಸಲಾಗಿದೆ.

ಆ) ಈ ಹಿಂದೆ ಸಿಂಗಟಾಲೂರು ಏತ ನೀರಾವರಿ ಯೋಜನೆ ಅಡಿಯಲ್ಲಿ ಫ್ಲೋ ಇರಿಗೇಶನ್ ಮುಖಾಂತರ ನೀರಾವರಿ ಸೌಲಭ್ಯ ಒದಗಿಸಲು ಯೋಜಿಸಲಾಗಿತ್ತು.

ಇ) 2013–14 ರ ಆಯವ್ಯಯದಲ್ಲಿ ಸಿಂಗಟಾಲೂರು ಏತ ನೀರಾವರಿ ಯೋಜನೆ ಅಡಿಯಲ್ಲಿ ಸೂಕ್ಷ್ಮ ನೀರಾವರಿ (ಮೈಕ್ರೋ ಇರಿಗೇಶನ್) ಅಳವಡಿಸಲಾಗುವುದೆಂದು ಘೋಷಿಸಿರುವುದು ನಿಜ. ಸೂಕ್ಷ್ಮ ನೀರಾವರಿ ಅಳವಡಿಕೆಯಿಂದ ನೀರಿನ ಉಳಿತಾಯವಾಗುವುದರಿಂದ ಹೆಚ್ಚಿನ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಯೋಜನೆಯನ್ನು ಪರಿಷ್ಕರಿಸಲಾಗಿರುತ್ತದೆ.

ಈ) ಸೂಕ್ಷ್ಮ ನೀರಾವರಿ ಒದಗಿಸುವ ಸಿಂಗಟಾಲೂರು ಏತ ನೀರಾವರಿ ಯೋಜನೆಯ ₹ 5768.04 ಕೋಟಿಗಳ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು ಸರ್ಕಾರದ ಪರಿಶೀಲನೆಯಲ್ಲಿದೆ.

ಉ) ಸೂಕ್ಷ್ಮ ಹನಿ ನೀರಾವರಿ ಸೌಲಭ್ಯ ಒದಗಿಸುವ ಯೋಜನಾ ವರದಿಯು ಸರ್ಕಾರದ ಮಟ್ಟದಲ್ಲಿ ಪರಿಶೀಲನೆಯಲ್ಲಿದೆ.

ಊ) ಈ ಯೋಜನೆಯನ್ನು 2016 ರ ಅಂತ್ಯಕ್ಕೆ ಪೂರ್ಣಗೊಳಿಸಲು ಯೋಜಿಸಲಾಗಿದೆ.

ಕಾಮಗಾರಿಗಳ ವಿಳಂಬ

2129 (3146); ಶ್ರೀ ಗುರುಪಾಗೌಡ ಸಂಗನಗೌಡ ಪಾಟೀಲ (ರೋಣ)

ಅ) ಸಿಂಗಟಾಲೂರು ಏತ ನೀರಾವರಿ ಯೋಜನೆಯಲ್ಲಿ ಕೆಲವೊಂದು ಕಾಮಗಾರಿಗಳಿಗೆ ಇಲಾಖೆಯಿಂದ ಮಂಜೂರಾತಿ ನೀಡುವಲ್ಲಿ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕಳೆದ 3 ವರ್ಷಗಳಲ್ಲಿ ಈ ಯೋಜನೆಗೆ ಬಿಡುಗಡೆಯಾದ ಅನುದಾನವೆಷ್ಟು? (ವಿವರಗಳನ್ನು ನೀಡುವುದು)

ಶ್ರೀ ಎಂ.ಬಿ. ಪಾಟೀಲ (ಜಲ ಸಂಪನ್ಮೂಲ ಸಚಿವರು)

ಅ) ಸಿಂಗಟಾಲೂರು ಏತ ನೀರಾವರಿ ಯೋಜನೆ ಅಡಿಯಲ್ಲಿ ಕಾಲಕಾಲಕ್ಕೆ ಸಲ್ಲಿಸಲಾದ ಯೋಜನಾ ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ನಿಯಮಾನುಸಾರ ಕ್ರಮ ವಹಿಸಿ ಮಂಜೂರಾತಿ ನೀಡಲಾಗಿರುತ್ತದೆ. ಈ ಯೋಜನೆಯ ಪರಿಷ್ಕೃತ ಅಂದಾಜು ಪಟ್ಟಿಯನ್ನು ಅನುಮೋದನೆಗೆ ಸಲ್ಲಿಸಿದ್ದು, ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಕಳೆದ 3 ವರ್ಷಗಳಲ್ಲಿ ಸಿಂಗಟಾಲೂರು ಏತ ನೀರಾವರಿ ಯೋಜನೆಗೆ ಬಿಡುಗಡೆ ಮಾಡಿ ವೆಚ್ಚ ಮಾಡಲಾದ ಅನುದಾನದ ವಿವರಗಳು ಕೆಳಗಿನಂತಿವೆ:

ವರ್ಷ	ವೆಚ್ಚ (ರೂ. ಲಕ್ಷಗಳಲ್ಲಿ)
2011–12	24045.00